# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 217

ಸದಸ್ಯರ ಹೆಸರು : ಡಾ|| ವೈ.ಎ. ನಾರಾಯಣಸ್ವಾಮಿ
(ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 06-07-2023

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ರಾಜ್ಯ ಸರ್ಕಾರಿ ನೌಕರರಿಗೆ ಎಷ್ಟನೇ ವೇತನ ಆಯೋಗವನ್ನು ನೀಡಲಾಗಿದೆ; ಯಾವಾಗ ನೀಡಲಾಗಿದೆ.(ವಿವರ ನೀಡುವುದು) | 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳ ಪ್ರಕಾರ ಸರ್ಕಾರಿ ನೌಕರರ ವೇತನ, ಭತ್ಯೆ ಮತ್ತು ಪಿಂಚಣಿಯನ್ನು ದಿನಾಂಕ 01-07-2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿರುತ್ತದೆ. |
| ಆ) | ಎಷ್ಟು ವರ್ಷಗಳಿಗೊಮ್ಮೆ ವೇತನ ಆಯೋಗವನ್ನು ರಚಿಸಲಾಗುವುದು; (ವಿವರ ನೀಡುವುದು) | ರಾಜ್ಯ ಸರ್ಕಾರವು ಸಾಂಪ್ರದಾಯಿಕವಾಗಿ ಕೇಂದ್ರ ವೇತನ ಆಯೋಗಗಳ ಶಿಫಾರಸ್ಸು ಹಾಗೂ ಕೇಂದ್ರ ವೇತನ ಪರಿಷ್ಕರಣೆಯ ಅವಧಿಯನ್ನು ಅನುಸರಿಸದೇ ತನ್ನದೇ ಆದ ವೇತನ ಆಯೋಗ / ವೇತನ ಸಮಿತಿಗಳ ಶಿಫಾರಸ್ಸಿನ ಮೇರೆಗೆ, ರಾಜ್ಯ ಸರ್ಕಾರಿ ನೌಕರರ ವೇತನ, ತುಟ್ಟಿ ಭತ್ಯೆ ಹಾಗೂ ಮನೆ ಬಾಡಿಗೆ ಭತ್ಯೆಗಳೂ ಸೇರಿದಂತೆ ಇತರೆ ಭತ್ಯೆಗಳನ್ನು ಕಾಲದಿಂದ ಕಾಲಕ್ಕೆ ಪರಿಷ್ಕರಿಸಿಕೊಂಡು ಬಂದಿರುತ್ತದೆ. ಇದು ಸರ್ಕಾರದ ನೀತಿಯಾಗಿರುತ್ತದೆ. |
| ಇ) | ರಾಜ್ಯ ಮತ್ತು ಕೇಂದ್ರ ಸರ್ಕಾರಿ ನೌಕರರ ನಡುವೆ ವೇತನ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಪ್ರಮಾಣದ ತಾರತಮ್ಯ ಇದೆ; (ವಿವರ ನೀಡುವುದು) | ಕೇಂದ್ರ ಸರ್ಕಾರದ ನಿಯಮಗಳು,ಮತ್ತು ಕೇಂದ್ರ ವೇತನ ಆಯೋಗಗಳ ಶಿಫಾರಸ್ಸುಗಳು ರಾಜ್ಯ ಸರ್ಕಾರದ ನೌಕರರಿಗೆ ಅನ್ವಯಿಸುವುದಿಲ್ಲ. ಅಷ್ಟೇಅಲ್ಲದೇ, ಕೇಂದ್ರ ಸರ್ಕಾರದ ಹುದ್ದೆಯ ಸ್ವರೂಪ, ಸೇವಾ ನಿಬಂಧನೆಗಳು ಇತ್ಯಾದಿ ಅಂಶಗಳು, ರಾಜ್ಯ ಸರ್ಕಾರದ ಹುದ್ದೆಗಳ ಸ್ವರೂಪ ಮತ್ತು ಸೇವಾ ನಿಬಂಧನೆಗಳು ಪರಸ್ಪರ ಭಿನ್ನವಾಗಿದ್ದು, ಒಂದನ್ನೊಂದು ಹೋಲಿಕೆ ಮಾಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. |

| | | |
|---|---|---|
| (ಈ) | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸಲು 7ನೇ ವೇತನ ಆಯೋಗವನ್ನು ರಚಿಸಿದ್ದು ಯಾವಾಗ; (ಅದರ ವಿವರಗಳನ್ನು ನೀಡುವುದು) | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಕುರಿತಂತೆ, ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು ದಿನಾಂಕ 19-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022ರಲ್ಲಿ ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶಿಸಲಾಗಿರುತ್ತದೆ |
| (ಉ) | ಈಗಾಗಲೇ ಸರ್ಕಾರ ಮೇಲ್ಕಂಡ 7ನೇ ವೇತನ ಆಯೋಗದ ವರದಿ ವಿಳಂಬಕ್ಕೆ ನೌಕರರಿಗೆ ನೀಡುತ್ತಿರುವ ಮಧ್ಯಂತರ ಪರಿಹಾರ ಎಷ್ಟು; ಎಷ್ಟು ಜನ ನೌಕರರಿಗೆ ಈ ಸೌಲಭ್ಯ ನೀಡಲಾಗುತ್ತಿದೆ; | ಸರ್ಕಾರಿ ಆದೇಶ ಸಂಖ್ಯೆ: ಆಇ 7 ಎಸ್.ಆರ್.ಪಿ 2023 ದಿನಾಂಕ 01-03-2023ರ ಆದೇಶದಲ್ಲಿ ದಿನಾಂಕ 01-04-2023ರಿಂದ ಜಾರಿಗೆ ಬರುವಂತೆ ಮೂಲ ವೇತನದ ಶೇ 17ರಷ್ಟು ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಲಾಗಿದೆ. ಅದರಂತೆ, ರಾಜ್ಯ ಸರ್ಕಾರದ ವೇತನ ಶ್ರೇಣಿಯಲ್ಲಿರುವ ಸಮಸ್ತ ಸರ್ಕಾರಿ ನೌಕರರು ಮತ್ತು ನಿವೃತ್ತಿ ವೇತನದಾರರು ಮಧ್ಯಂತರ ಪರಿಹಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. |
| (ಊ) | ಸರ್ಕಾರ 7ನೇ ವೇತನ ಆಯೋಗದ ವರದಿಯನ್ನು ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸುತ್ತಿದೆ? | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆಯ ವಿಷಯವು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿದ ವಿಷಯವಾಗಿರುತ್ತದೆ. ಆದುದರಿಂದ, 7ನೇ ರಾಜ್ಯ ವೇತನ ಆಯೋಗವು ಸಲ್ಲಿಸಬಹುದಾದ ಶಿಫಾರಸ್ಸುಗಳನ್ನು ರಾಜ್ಯದ ಆರ್ಥಿಕ ಸ್ಥಿತಿಗತಿಗಳ ಬೆಳಕಿನಲ್ಲಿ ಪರಿಶೀಲಿಸಿ ನಿಯಮಾನುಸಾರ ಕ್ರಮವಹಿಸಲಾಗುವುದು. |

ಸಂ: ಆಇ 12 ಎಸ್‌ಆರ್‌ಪಿ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ